ಬೆಂಗಳೂರು ನಗರ ವಿಶ್ವವಿದ್ಯಾನಿಲಯ
BENGALURU CITY UNIVERSITY
BE BOUNDLESS
ಸೆಂಟ್ರಲ್ ಕಾಲೇಜು ಆವರಣ, ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು– 560 001.
Ph.No.080-22961016 / 22131385 E-Mail ID: registrar@bcu.ac.in

ಸಂಖ್ಯೆ:ಬಿಸಿಯು/ಶೈಕ್ಷಣಿಕ/ಸ್ನಾ.ಕೋ.ಪ್ರವೇಶ/08/2023–24

ದಿನಾಂಕ:06.12.2023

## ಸುತ್ತೋಲೆ

**ವಿಷಯ:** ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ/ಶಿಕ್ಷಣ ಸಂಸ್ಥೆಗಳಲ್ಲಿ/ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ 2ನೇ ವರ್ಷದ 3ನೇ ಸೆಮಿಸ್ಟರ್‌ಗೆ ಪ್ರವೇಶಾತಿ ಶುಲ್ಕಗಳನ್ನು ಪಾವತಿಸುವ ಬಗ್ಗೆ:–

**ಉಲ್ಲೇಖ:**
1. ಸರ್ಕಾರ ಆದೇಶ ಸಂಖ್ಯೆ: SWD/EDU/ED3/91/2023 ಬೆಂಗಳೂರು ದಿನಾಂಕ:03.07.2023
2. ಸರ್ಕಾರದ ಆದೇಶ ಸಂಖ್ಯೆ: ಸಕಇ/STP/108/2023 ದಿನಾಂಕ:25.08.2023
3. ಸಂಖ್ಯೆ:ಬಿಸಿಯು/ಶೈಕ್ಷಣಿಕ/ಸ್ನಾ.ಕೋ.ಪ್ರವೇಶ/08/2023–24 ದಿನಾಂಕ:04.11.2023
4. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:05.12.2023

*************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(3) ರ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸುತ್ತೋಲೆಯಲ್ಲಿ 2023–24ನೇ ಸಾಲಿನಲ್ಲಿ ಸ್ನಾತಕೋತ್ತರ ಕೋರ್ಸುಗಳಿಗೆ ದಾಖಲಾಗಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪೋಷಕರ ವರಮಾನ ರೂ.2.50 ಲಕ್ಷದ ಮಿತಿಯೊಳಗೆ ಇರುವ ವಿದ್ಯಾರ್ಥಿಗಳಿಂದ ರೂ.365/–ಗಳನ್ನು ಪ್ರವೇಶಾತಿ ಶುಲ್ಕವನ್ನಾಗಿ ಪಡೆಯಲು ಸುತ್ತೋಲೆ ಉಲ್ಲೇಖ(3) ರಲ್ಲಿ ತಿಳಿಸಲಾಗಿದ್ದು ವಿದ್ಯಾರ್ಥಿಗಳ ಮನವಿಯ ಮೇರೆಗೆ ಸ್ನಾತಕೋತ್ತರ ಕೋರ್ಸಿನ 2ನೇ ವರ್ಷದ 3ನೇ ಸೆಮಿಸ್ಟರ್‌ಗೆ ಪ್ರವೇಶಾತಿ ಪಡೆಯುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೂ ಅನ್ವಯವಾಗುವಂತೆ ಜಾರಿಗೊಳಿಸಲಾಗಿದೆ. ಉಳಿದ ಪ್ರವೇಶಾತಿ ಶುಲ್ಕದ ಬಾಕಿ ಶುಲ್ಕಗಳನ್ನು ವಸೂಲು ಮಾಡಿ ವಿಶ್ವವಿದ್ಯಾನಿಲಯಕ್ಕೆ ಜಮಾ ಮಾಡುವ ಜವಾಬ್ದಾರಿಯನ್ನು ಆಯಾ ವಿಭಾಗದ ಮುಖ್ಯಸ್ಥರ ಗಮನಕ್ಕೆ ತರಲಾಗಿದೆ.

ಈಗಾಗಲೇ 2ನೇ ವರ್ಷದ 3ನೇ ಸೆಮಿಸ್ಟರ್ ಪ್ರವೇಶಾತಿ ಸಮಯದಲ್ಲಿ Online ನಲ್ಲಿ ಸಂಪೂರ್ಣ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನ ಮಂಜೂರಾದಾಗ ವಿಶ್ವವಿದ್ಯಾನಿಲಯಕ್ಕೆ ಶುಲ್ಕ ಪಾವತಿಸಿರುವ ಅಗತ್ಯವಿಲ್ಲವೆಂದು ಈ ಮೂಲಕ ತಿಳಿಸಲಾಗಿದೆ.

ಕುಲಸಚಿವರು

ಗೆ,

1. ಮುಖ್ಯಸ್ಥರು, ಸ್ನಾತಕೋತ್ತರ ಪದವಿ ವಿಭಾಗಗಳು, ಬೆಂ.ನ.ವಿ, ಬೆಂಗಳೂರು
2. ಪ್ರಾಂಶುಪಾಲರು ಸಂಯೋಜಿತ ಕಾಲೇಜುಗಳು, ಬೆಂ.ನ.ವಿ, ಬೆಂಗಳೂರು

**ಪ್ರತಿಗಳು:**

1. ಕುಲಪತಿಗಳು/ಕುಲಸಚಿವರು/ಕುಲಸಚಿವರು(ಮೌ), ವಿತ್ತಾಧಿಕಾರಿಗಳರವರ ಆಪ್ತ ಕಾರ್ಯದರ್ಶಿಗಳು, ಬೆ.ನ.ವಿ.ಬೆಂಗಳೂರು.
2. ಅಂತರ್ಜಾಲದ ಪ್ರತಿ/ UUCMS Portal.
3. ಕಛೇರಿ ಪ್ರತಿ/ರಕ್ಷಾ ಕಡತ.